# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 520(697)
ಸದಸ್ಯರ ಹೆಸರು : ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 22-07-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಯಾವ ವರ್ಷದವರೆಗೆ ಖಾಲಿಯಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆಯೇ; | ದಿನಾಂಕ:31-12-2015ರವರೆಗೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಮತ್ತು ನಿಗದಿತ ಮಾನದಂಡಗಳನ್ನು ಪೂರೈಸಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಿದೆ, ಅದರಂತೆ ಹಾಲಿ ಒಟ್ಟು 68 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಭರ್ತಿ ಮಾಡಲು ಅವಕಾಶ ನೀಡಲಾಗಿದೆ. |
| ಆ) | ಅನುಮತಿ ನೀಡಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು: | ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಭರ್ತಿ ಮಾಡಲು ಈ ಕೆಳಕಂಡ ಮಾನದಂಡಗಳನ್ನು ನಿಗಧಿಪಡಿಸಲಾಗಿದೆ:-<br>1) ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ ಎಂ.ಪಿಇಡಿ ವಿದ್ಯಾರ್ಹತೆಯನ್ನು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು.<br>2) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 43 ಟಿಪಿಯು 2018 ದಿನಾಂಕ:09-10-2019ರನ್ವಯ ವಿದ್ಯಾರ್ಥಿಗಳ ದಾಖಲಾತಿಯನ್ನು ಹೊಂದಿರತಕ್ಕದ್ದು<br>3) ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಯು 2011 ದಿನಾಂಕ:30-09-2011ರನ್ವಯ ವಿಧಿಸಿರುವಂತೆ ಫಲಿತಾಂಶ ಮತ್ತು ಇತರ ಮಾನದಂಡಗಳನ್ನು ಪೂರೈಸತಕ್ಕದ್ದು. |
| ಇ) | ಅನುಮತಿ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಿ ಆಯ್ಕೆ ಪಟ್ಟಿಯ ಅನುಮೋದನೆಗಾಗಿ ಬಾಕಿ ಇರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; | ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಹಾಲಿ ಸರ್ಕಾರವು ಅನುಮತಿಸಿದ ಹುದ್ದೆಗಳ ಪೈಕಿ ಇಲಾಖೆಯಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಆಯ್ಕೆ ಪಟ್ಟಿಗೆ ಅನುಮೋದನೆಗೆ ಸಂಬಂಧಿಸಿದಂತೆ ಗದಗ ಜಿಲ್ಲೆಯ ಈ ಕೆಳಕಂಡ 02 ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಭರ್ತಿ ಮಾಡಲು, ಇಲಾಖೆಗೆ ಅನುಮತಿ ನೀಡಲಾಗಿದ್ದು, |

| | | |
|---|---|---|
| | | ತದರಂತೆ, ಆಡಳಿತ ಮಂಡಳಿಯು ಆಯ್ಕೆ ಪಟ್ಟಿ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br>1. ವಿದ್ಯಾದಾನ ಸಮಿತಿಯ ಬಾಲಕಿಯರ ಸಂಯುಕ್ತ ಪದವಿ ಪೂರ್ವ ಕಾಲೇಜು, ಗದಗ ಜಿಲ್ಲೆ,(ಜಿಜಿ–023).<br>2. ವಿದ್ಯಾದಾನ ಸಮಿತಿಯ ಬಾಲಕರ ಸಂಯುಕ್ತ ಪದವಿ ಪೂರ್ವ ಕಾಲೇಜು, ಗದಗ ಜಿಲ್ಲೆ (ಜಿಜಿ–022).<br>ಮೇಲಿನ 02 ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿ ಕರ್ನಾಟಕ ಪದವಿ ಪೂರ್ವ ಶಿಕ್ಷಣ 2006ರ ನಿಯಮ–17ನ್ನು ಪಾಲನೆ ಮಾಡದೇ ಇರುವುದರಿಂದ ಪುನ: ನೇಮಕಾತಿ ಪಕ್ರಿಯೆ ನಡೆಸಿ ಪ್ರಸ್ತಾವನೆಯನ್ನು ಸಲ್ಲಿಸಿದ್ದಲ್ಲಿ ಪರಿಶೀಲಿಸಲಾಗುವುದು ಎಂದು ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರ ಪತ್ರ ದಿನಾಂಕ:16–02–2024ರಲ್ಲಿ ಜಿಲ್ಲಾ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಗದಗ ಜಿಲ್ಲೆ ಇವರಿಗೆ ತಿಳಿಸಲಾಗಿರುತ್ತದೆ. ಆದರೆ ಇದುವರೆವಿಗೂ ಈ ಸಂಬಂಧ ಯಾವುದೇ ಪ್ರಸ್ತಾವನೆಗಳೂ ನಿರ್ದೇಶನಾಲಯಕ್ಕೆ ಸ್ವೀಕೃತವಾಗಿರುವುದಿಲ್ಲ. |
| ಈ) | ಪ್ರಸ್ತುತ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ವಿದ್ಯಾರ್ಥಿಗಳ ಸಂಖ್ಯೆಯನ್ನು 500ಕ್ಕೆ ಸೀಮಿತಗೊಳಿಸಿ ಆದೇಶ ಹೊರಡಿಸಲಾಗಿದೆಯೇ; ಆದೇಶ ಹೊರಡಿಸಿದ್ದಲ್ಲಿ, ಸದರಿ ಆದೇಶದ ಪ್ರತಿ ಒದಗಿಸುವುದು; | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 43 ಟಿಪಿಯು 2018 ದಿನಾಂಕ:09–10–2019ರಲ್ಲಿ the Karnataka Pre-University Education (Academic, Registration, Administration and Grant-in-aid etc.,) (Amendment) Rules, 2019ನ್ನು ಜಾರಿಗೆ ತರಲಾಗಿದೆ. ಸದರಿ ತಿದ್ದುಪಡಿ ನಿಯಮಗಳನ್ವಯ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳನ್ನು ಅನುದಾನಕ್ಕೆ ಒಳಪಡಿಸಲು ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿ ಸೇರಿ ಕನಿಷ್ಠ 120 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗದಿಪಡಿಸಿ ಆದೇಶಿಸಿದೆ.<br>ಮುಂದುವರೆದು ಇತ್ತೀಚೆಗೆ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD/637/EXP-8/2022(EXP-8) ದಿನಾಂಕ:14–06–2023ರಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗೆ 120 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗಧಿಪಡಿಸಿರುವುದರಿಂದ ರಾಜ್ಯದ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 22 ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ತಲಾ 01 ದೈಹಿಕ ಶಿಕ್ಷಣ ಉಪನ್ಯಾಸಕರಂತೆ ಒಟ್ಟು 750 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಸೃಜಿಸಬೇಕಾಗಿದ್ದು, ರಾಜ್ಯದ ಬೊಕ್ಕಸಕ್ಕೆ ಹೆಚ್ಚಿನ ಆರ್ಥಿಕ ಹೊರೆ ಉಂಟಾಗುವುದನ್ನು ಪರಿಗಣಿಸಿ, ಸದರಿ 120 ವಿದ್ಯಾರ್ಥಿಗಳ ಸಂಖ್ಯಾಬಲದ |
| (ಉ) | ಇಲ್ಲವಾದಲ್ಲಿ, ಈ ಹಿಂದೆ ಇದ್ದ ಮಾನದಂಡಗಳನ್ವಯ ನೇಮಕಾತಿ ಮಾಡಿಕೊಳ್ಳಲಾದವರ ಆಯ್ಕೆ ಪಟ್ಟಿಯನ್ನು ಅನುಮೋದಿಸಲು ಇರುವ ಸಮಸ್ಯೆ ಏನು: ಸದರಿ ಸಮಸ್ಯೆಯನ್ನು ಸರಿಪಡಿಸಿ ಅನುಮೋದನೆಗೊಳಿಸಲು ಸರ್ಕಾರ ಕ್ರಮ ವಹಿಸಲಾಗುವುದೇ? | |

| | | |
|---|---|---|
| | | ಬದಲಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ 500 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗಧಿಪಡಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದೆ. ಹೀಗೆ 500 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗಧಿಪಡಿಸುವಾಗ ಪ್ರಸ್ತುತ ಮಂಜೂರು ಮಾಡಿದ ಹುದ್ದೆಗಳನ್ನು ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಸೇವೆಯಲ್ಲಿರುವವರೆಗೆ ಸಂರಕ್ಷಿಸಬಹುದೆಂದು ಸಹ ತಿಳಿಸಿದೆ.<br><br>ಆರ್ಥಿಕ ಇಲಾಖೆಯು 500 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗದಿಪಡಿಸಲು ತಿಳಿಸಿದ್ದು, 500 ವಿದ್ಯಾರ್ಥಿಗಳ ಸಂಖ್ಯಾಬಲದ ಬದಲಿಗೆ 120 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗದಿಪಡಿಸುವ ಬಗ್ಗೆ ಮರುಪರಿಗಣಿಸಿ ಅಭಿಪ್ರಾಯ ನೀಡುವಂತೆ ಕೋರಿ ಮತ್ತೊಮ್ಮೆ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದ್ದು, ಪ್ರಸ್ತುತ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಇಪಿ 243 ಡಿಜಿಡಬ್ಲ್ಯೂ 2024**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.